ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 274

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.09.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗಿರುವ BPL ಮತ್ತು APL ಪಡಿತರ ಚೀಟಿಗಳ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗಿರುವ ವಿವಿಧ ಪಡಿತರ ಚೀಟಿಗಳ ವಿವರ ಕೆಳಕಂಡಂತಿದೆ.
<table><tr><th>ಎ.ಪಿ.ಎಲ್ ಪಡಿತರ ಚೀಟಿ</th><th>ಬಿ.ಪಿ.ಎಲ್ ಪಡಿತರ ಚೀಟಿ</th><th>ಆದ್ಯತೇತರ ಪಡಿತರ ಚೀಟಿ</th></tr><tr><td>10,93,702</td><td>1,16,67,540</td><td>20,79,787</td></tr></table></td></tr>
<tr><td>ಆ</td><td>ಇಲ್ಲಿಯವರೆಗೆ ಹೊಸದಾಗಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಹಾಗೂ ವಿತರಿಸಿದ ಪಡಿತರಗಳು ಎಷ್ಟು;</td><td><table><tr><th>ಅರ್ಜಿ ವಿಧಾನ</th><th>ಸಲ್ಲಿಕೆಯಾದ ಅರ್ಜಿಗಳು</th><th>ವಿತರಿಸಿದ ಪಡಿತರ ಚೀಟಿಗಳು</th></tr><tr><td>ಆದ್ಯತಾ ಪಡಿತರ ಚೀಟಿ</td><td>4,94,379</td><td>3,86,208</td></tr><tr><td>ಆದ್ಯತೇತರ ಪಡಿತರ ಚೀಟಿ</td><td>2,27,762</td><td>1,69,400</td></tr></table></td></tr>
</table>

ಇ	ನ್ಯಾಯಬೆಲೆ ಅಂಗಡಿಗಳು ಸಮರ್ಪಕವಾಗಿ ದಿನಸಿ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಂಡ ಕ್ರಮಗಳೇನು;	ಹೌದು, ಸಾರ್ವಜನಿಕ ವಿತರಣಾ ಪದ್ಧತಿಯಲ್ಲಿ ಯಾವುದೇ ನ್ಯಾಯಬೆಲೆ ಅಂಗಡಿಗಳ ವಿತರಣೆಯಲ್ಲಿ ಯಾವುದಾದರು ಲೋಪ ಕಂಡುಬಂದಲ್ಲಿ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಿ ನಿಯಾಮನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.
ಈ	ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನೀಡುವ ದಿನಸಿ ವಸ್ತುಗಳನ್ನು ಹೊರತುಪಡಿಸಿ, ಬೇರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪೂರೈಕೆಯಲ್ಲಿರುವ ಅಕ್ಕಿ ಗೋಧಿ,ರಾಗಿ,ಇತ್ಯಾದಿ ಆಹಾರ ಧಾನ್ಯಗಳನ್ನು ಹೊರತುಪಡಿಸಿ ಬೇರೆ ವಸ್ತುಗಳನ್ನು ಮಾರಾಟ ಮಾಡಲು ಅವಕಾಶವಿರುತ್ತದೆ.
ಉ	ಇತರೆ ವಸ್ತುಗಳನ್ನು ಖರೀದಿ ಮಾಡಿದರೆ ಮಾತ್ರ ದಿನಸಿ ನೀಡಲಾಗುವುದು ಎಂದು ನ್ಯಾಯಬೆಲೆ ಅಂಗಡಿಯವರು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?	ಯಾವುದೇ ನ್ಯಾಯಬೆಲೆ ಅಂಗಡಿಯವರು ಮಾರಾಟ ಮಾಡುವ ಬೇರೆ ವಸ್ತುಗಳನ್ನು ಖರಿದಿಸುವಂತೆ ಪಡಿತರ ಚೀಟಿದಾರರಿಗೆ ಒತ್ತಾಯ ಮಾಡುವಂತಿಲ್ಲ. ನ್ಯೂನತೆ ಎಸಗಿದ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಲಾಗುತ್ತದೆ.

ಆನಾಸ 245 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.